ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE : 12/3/21

# ಸಿಡಿ ಪ್ರಕರಣ: ಖಾಸಗಿ ಏಜೆನ್ಸಿಗೆ ಮೊರೆ?

## ಷಡ್ಯಂತ್ರ ಕುರಿತು 2 ದಿನದೊಳಗೆ ರಮೇಶ್ ಜಾರಕಿಹೊಳಿ ಅಧಿಕೃತ ದೂರು ದಾಖಲಿಸುವ ಸಾಧ್ಯತೆ

ಬೆಂಗಳೂರು: ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅವರ ಅಶ್ಲೀಲ ವಿಡಿಯೋ ಪ್ರಕರಣ ತನಿಖೆ ನಡೆಸಲು ರಾಜ್ಯ ಸರ್ಕಾರ ವಿಶೇಷ ತನಿಖಾ ತಂಡ ರಚನೆ ಮಾಡಿದ ಬೆನ್ನಲ್ಲೇ ಜಾರಕಿಹೊಳಿ ಸಹೋದರರು ಖಾಸಗಿ ಏಜೆನ್ಸಿಯಿಂದ ತನಿಖೆ ನಡೆಸಿ ಮಾಹಿತಿ ಸಂಗ್ರಹಕ್ಕೆ ಮುಂದಾಗಿದ್ದಾರೆ.

ಈ ನಡುವೆ ರಮೇಶ್ ಜಾರಕಿಹೊಳಿ ತಮ್ಮ ವಿರುದ್ಧ ಷಡ್ಯಂತ್ರ ಮಾಡಿರುವ ಬಗ್ಗೆ ಇನ್ನೆರಡು ದಿನದೊಳಗೆ ಅಧಿಕೃತ ದೂರು ದಾಖಲಿಸಲು ಮುಂದಾಗಿದ್ದಾರೆ.



ಪ್ರಕರಣದ ತನಿಖೆಗೆ ಸರ್ಕಾರ ಎಸ್ಐಟಿ ರಚನೆ ಮಾಡಿದ್ದರೂ ಅಧಿಕೃತ ದೂರು ದಾಖಲಾಗದೇ ಸಂಪೂರ್ಣ ತನಿಖೆ ನಡೆಸಲು ಸಾಧ್ಯವಾಗದ ಹಿನ್ನೆಲೆಯಲ್ಲಿ ರಮೇಶ್ ಜಾರಕಿಹೊಳಿ ಅಧಿಕೃತ ದೂರು ದಾಖಲಿಸಿ, ತನಿಖೆಗೆ ಸಹಕಾರ ನೀಡಲು ಮುಂದಾಗಿದ್ದಾರೆ ಎಂದು ತಿಳಿದು ಬಂದಿದೆ.

ಈಗಾಗಲೇ ತಮಗೆ ದೊರೆತಿರುವ ಮಾಹಿತಿ ಪ್ರಕಾರ ಈ ಸಿಡಿ ಸಿದ್ಧಪಡಿಸಲು ಪ್ರಮುಖ ಪಾತ್ರ ವಹಿಸಿದವರ ಹೆಸರುಗಳ ಸಮೇತ ದೂರು ನೀಡಲು ರಮೇಶ್ ಜಾರಕಿಹೊಳಿ ನಿರ್ಧರಿಸಿದ್ದಾರೆ ಎಂದು ಹೇಳಲಾಗುತ್ತಿದ್ದು ಇದರಲ್ಲಿ ಪ್ರಭಾವಿಗಳು ಇರುವ ಸಾಧ್ಯತೆ ಇರುವುದರಿಂದ ದೂರಿನಲ್ಲಿ ದಾಖಲಿಸುವ ಹೆಸರುಗಳ ಬಗ್ಗೆ ಸಂಪೂರ್ಣ ಅಧಿಕೃತ ದಾಖಲೆ ಸಂಗ್ರಹಿಸಿಕೊಂಡೇ ದೂರಿನಲ್ಲಿ ಹೆಸರು ಪ್ರಸ್ತಾಪಿಲು ಮುಂದಾಗಿದ್ದಾರೆ ಎನ್ನಲಾಗುತ್ತಿದೆ.

**ಖಾಸಗಿ ತನಿಖೆ:** ಸಿಡಿ ಪ್ರಕರಣ ಹೊರ ಬಂದ ನಂತರ ಬಿಡುಗಡೆಯಾಗಿರುವ ವಿಡಿಯೋ ಬಗ್ಗೆ ಸತ್ಯಾಸತ್ಯತೆ ಅರಿತು ಈ ಬಗ್ಗೆ ಸಂಪೂರ್ಣ ಮಾಹಿತಿ ಕಲೆ ಹಾಕುವಂತೆ ಜಾರಕಿಹೊಳಿ ಸಹೋದರರು ಮುಂಬೈ ಮೂಲದ ಖಾಸಗಿ ಕಂಪನಿಗೆ ತನಿಖೆಗೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ. ಈಗಾಗಲೇ ಆ ಸಂಸ್ಥೆ ಈ ಪ್ರಕರಣದಲ್ಲಿ ಕಳೆದ 1 ವರ್ಷದಲ್ಲಿ ಯಾರು ಯಾರೊಂದಿಗೆ ದೂರವಾಣಿ ಸಂಪರ್ಕ ಮಾಡಿದ್ದಾರೆ ಎನ್ನುವ ಮಾಹಿತಿ ಕಲೆ ಹಾಕಿದೆ ಎನ್ನಲಾಗಿದ್ದು 6000 ಕಾಲ್ ರೆಕಾರ್ಡ್ ಲಭ್ಯವಾಗಿದೆ ಎಂಬ ಮಾಹಿತಿ ಲಭ್ಯವಾಗಿದೆ. ಸಿಡಿಯನ್ನು ಸಂಪೂರ್ಣ ನಕಲಿಯಾಗಿ ಸೃಷ್ಟಿಸಿರುವುದಕ್ಕೆ ಪೂರಕವಾದ ಮಾಹಿತಿಗಳು ಲಭ್ಯವಾಗಿದೆ ಎನ್ನಲಾಗಿದ್ದು, ಅದೇ ಕಾರಣಕ್ಕೆ ರಮೇಶ್ ಧೈರ್ಯವಾಗಿ ಮಾಧ್ಯಮಗಳ ಎದುರು ನಕಲಿ ಮಾಡಲಾಗಿದೆ ಎಂದು ಹೇಳಿಕೆ ನೀಡಿದ್ದಾರೆ ಎಂದು ಅವರ ಆಪ್ತ ಮೂಲಗಳಿಂದ ಮಾಹಿತಿ ಲಭ್ಯವಾಗಿದೆ. ಖಾಸಗಿ ಕಂಪನಿ ನಡೆಸುತ್ತಿರುವ ತನಿಖೆಯಲ್ಲಿ ದೊರೆಯುವ ದಾಖಲೆಗಳನ್ನು ಎಸ್ಐಟಿಗೆ ಸಲ್ಲಿಸಿ, ತಮಗೆ ದೊರೆತ ದಾಖಲೆ ಆಧಾರದಲ್ಲಿ ತನಿಖೆ ನಡೆಸುವಂತೆ ಮನವಿ ಮಾಡಲು ಜಾರಕಿಹೊಳಿ ಸಹೋದರರು ಮುಂದಾಗಿದ್ದಾರೆ ಎಂದು ತಿಳಿದು ಬಂದಿದೆ.

**ಮಾರ್ಫಿಂಗ್ ?:** ಸಿಡಿ ಪ್ರಕರಣದಲ್ಲಿ ಸಂಪೂರ್ಣ ತಂತ್ರಜ್ಞಾನ ಬಳಸಿ ಮಾರ್ಫಿಂಗ್ ಮಾಡಿ ಸೀನ್‌ಗಳನ್ನು ಜೋಡಿಸಲಾಗಿದೆ ಎಂಬ ಸಂದೇಹ ತನಿಖೆ ನಡೆಸುತ್ತಿರುವ ಏಜೆನ್ಸಿಗೆ ವ್ಯಕ್ತವಾಗಿದೆ ಎನ್ನಲಾಗಿದ್ದು ಅದನ್ನು ಅದರ ಸತ್ಯಾಸತ್ಯತೆ ತಿಳಿಯಲು ವಿಧಿ ವಿಜ್ಞಾನ ಪ್ರಯೋಗಾಲಯದಲ್ಲಿ ಪರೀಕ್ಷೆ ನಡೆಸಬೇಕಿದೆ. ಆದರೆ, ಅಧಿಕೃತ ದೂರು ದಾಖಲಾಗದೇ ವಿಧಿ ವಿಜ್ಞಾನ ಪ್ರಯೋಗಾಲಯ ದಲ್ಲಿ ಪರೀಕ್ಷೆ ನಡೆಸುವುದು ಕಷ್ಟ ಎನ್ನುವ ಕಾರಣಕ್ಕೆ ದೂರು ದಾಖಲಿಸಿದ ನಂತರ ಎಲ್ಲ ಮಾಹಿತಿಯನ್ನು ಎಸ್ಐಟಿಗೆ ಒದಗಿಸುವ ಆಲೋಚನೆಯಲ್ಲಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

### ದೆಹಲಿ ವಕೀಲರ ತಂಡ

ಈ ಪ್ರಕರಣದಲ್ಲಿ ಕಾನೂನು ಹೋರಾಟ ನಡೆಸಲು ಬಿಜೆಪಿ ಹೈಕಮಾಂಡ್ ಕೂಡ ರಮೇಶ್ ಜಾರಕಿಹೊಳಿಗೆ ಸಹಕಾರ ನೀಡುತ್ತಿದೆ ಎಂದು ತಿಳಿದು ಬಂದಿದ್ದು, ದೆಹಲಿಯಿಂದ ಪಕ್ಷದ ವತಿಯಿಂದಲೇ ನಾಲ್ವರು ನ್ಯಾಯವಾದಿಗಳು ಬೆಂಗಳೂರಿಗೆ ಆಗಮಿಸಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಈ ಪ್ರಕರಣದ ಕುರಿತು ಸಂಪೂರ್ಣ ಕಾನೂನು ಸಲಹೆ ನೀಡುತ್ತಿದ್ದಾರೆ ಎಂದು ತಿಳಿದು ಬಂದಿದೆ.

> ರಮೇಶ್ ಜಾರಕಿಹೊಳಿ ಸಿಡಿ ವಿಚಾರವಾಗಿ ಅನೇಕ ಅನುಮಾನ ಮೂಡಿದೆ. ಆದರಲ್ಲೂ ಕಾಂಗ್ರೆಸ್ ತೊರೆದು ಬಿಜೆಪಿ ಸರ್ಕಾರ ರಚನೆಗೆ ಕಾರಣರಾದ ಎಲ್ಲ ಶಾಸಕರನ್ನು ಟಾರ್ಗೆಟ್ ಮಾಡಲಾಗುತ್ತಿದೆಯೇ ಎಂಬ ಅನುಮಾನ ಬಲವಾಗಿ ಮೂಡುತ್ತಿದೆ.
>
> • ಬಿ. ಶ್ರೀರಾಮುಲು, ಸಚಿವ

### ನ್ಯಾಯಾಧೀಶರ ನೇತೃತ್ವದಲ್ಲಿ ತನಿಖೆ ನಡೆಸಿ: ಖಂಡ್ರೆ

ಯಾದಗಿರಿ: ಸಿಡಿ ಪ್ರಕರಣ ಅಸಹ್ಯ. ಇಡೀ ನಾಗರಿಕ ಸಮಾಜ ತಲೆ ತಗ್ಗಿಸುವಂತದ್ದು. ಈ ಬಗ್ಗೆ ಸುಪ್ರೀಂ ಕೋರ್ಟ್ ಇಲ್ಲವೇ ಹೈಕೋರ್ಟ್ ನ್ಯಾಯಮೂರ್ತಿಗಳ ನೇತೃತ್ವದ ಸಮಿತಿ ವತಿಯಿಂದ ತನಿಖೆ ನಡೆದರೆ ಸತ್ಯಾಸತ್ಯತೆ ಹೊರಗೆ ಬರಲಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಈಶ್ವರ ಖಂಡ್ರೆ ಹೇಳಿದರು. ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ನಾಲ್ಕು ರಾಜ್ಯದ ಚುನಾವಣೆಯಲ್ಲಿ ಜನರು ಬಿಜೆಪಿಗೆ ತಕ್ಕ ಪಾಠ ಕಲಿಸಲಿದ್ದಾರೆ. ಬಿಜೆಪಿ ಧೂಳಿಪಠವಾಗಲಿದೆ ಎಂದರು. ಮಧು ಬಂಗಾರಪ್ಪ ಕಾಂಗ್ರೆಸ್ ಸೇರುವುದರಿಂದ ಪಕ್ಷಕ್ಕೆ ಮತ್ತಷ್ಟು ಶಕ್ತಿ ಬರಲಿದೆ. ಬಹಳಷ್ಟು ಜನರು ಕಾಂಗ್ರೆಸ್ ಸಂಪರ್ಕದಲ್ಲಿದ್ದಾರೆ. ಕಾಂಗ್ರೆಸ್ ಬಿಟ್ಟು ಹೋದವರು ಮರು ಸೇರ್ಪಡೆಗೆ ಮುಂದಾದರೆ ಅಲ್ಲಂ ವೀರಭದ್ರಪ್ಪ ಅವರ ನೇತೃತ್ವದ ಸಮಿತಿ ಮುಂದೆ ಚರ್ಚಿಸಿ ಮುಂದಿನ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

### ಎಸ್ಐಟಿ ತನಿಖೆಯಿಂದ ಪ್ರಯೋಜನವಿಲ್ಲ

ಮೈಸೂರು: ರಮೇಶ್ ಜಾರಕಿಹೊಳಿ ಸಿಡಿ ಬಿಡುಗಡೆ ಪ್ರಕರಣವನ್ನು ಸರ್ಕಾರ ಎಸ್ಐಟಿ ತನಿಖೆಗೆ ವಹಿಸಿರುವುದರಿಂದ ಯಾವುದೇ ಪ್ರಯೋಜನವಿಲ್ಲ, ಜೊತೆಗೆ ತನಿಖೆಯಿಂದ ಯಾರಿಗೂ ಶಿಕ್ಷೆ ಆಗುವುದಿಲ್ಲ ಎಂದು ಮಾಜಿ ಸಿಎಂ ಎಚ್.ಡಿ. ಕುಮಾರಸ್ವಾಮಿ ಹೇಳಿದರು.



ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಎಸ್ಐಟಿ ತನಿಖೆಯಿಂದ ಯಾರಿಗೂ ಶಿಕ್ಷೆ ಆಗಲ್ಲ, ಇದು ತಿಪ್ಪೆ ಸಾರಿಸುವ ಕೆಲಸವಷ್ಟೇ. ಎಸ್ಐಟಿಯಿಂದ ತನಿಖೆ ಮಾಡಿಸುತ್ತೇವೆ ಎಂದು ಹೇಳುತ್ತಾರೆ. ಆದರೆ, ಯಾರ ವಿರುದ್ಧ ತನಿಖೆ ನಡೆಸುತ್ತಾರೆ ? ಏನಂತ ತನಿಖೆ ಮಾಡುತ್ತಾರೆ ಎಂದು ಪ್ರಶ್ನಿಸಿದ ಅವರು, ಇಂತಹ ತನಿಖಾ ಸಂಸ್ಥೆಗಳಿಂದ ಸ್ವಾತಂತ್ರ್ಯ ನಂತರ ಯಾರಿಗೂ ಶಿಕ್ಷೆಯಾಗಿಲ್ಲ, ಹಾಗೇನಾದರೂ ಶಿಕ್ಷೆ ಆಗಿದ್ದರೆ ಅದು ಅಮಾಯಕರಿಗೆ ಆಗಿದೆ ಅಷ್ಟೆ ಎಂದರು.

ಆರು ಜನ ಮಹಾನುಭಾವರು ಕೋರ್ಟ್ ಮೆಟ್ಟಿಲೇರಿ ತಮ್ಮ ಚಾರಿತ್ರ್ಯವಧೆ ಮಾಡುವಂತಹ ಅಪಪ್ರಚಾರಗಳಿಗೆ ಅವಕಾಶ ಕೊಡಬೇಡಿ ಎಂದು ಕೇಳಿಕೊಳ್ಳಬಹುದಿತ್ತು. ಆದರೆ ನಮಗೆ ಸಂಬಂಧಪಟ್ಟ ಸಿಡಿ ವಿಚಾರ ಪ್ರಸಾರ ಮಾಡಬಾರದು ಅಂತ ಕೋರಿದ್ದಾರೆ. ಜೊತೆಗೆ ತಮಗೆ ರಕ್ಷಣೆ ನೀಡುವಂತೆ ಕೋರಿ ಕೋರ್ಟ್ ಮೊರೆ ಹೋಗಿದ್ದಾರೆ. ಸಚಿವರಾಗಿದ್ದುಕೊಂಡು ತಮಗೆ ತಾವೇ ರಕ್ಷಣೆ ಮಾಡಿಕೊಳ್ಳಲಾರದವರು ರಾಜ್ಯದ ಜನರನ್ನು ಹೇಗೆ ರಕ್ಷಣೆ ಮಾಡ್ತಾರೆ ಎಂದು ಪ್ರಶ್ನಿಸಿದರು.

**ಟಿಎ-ಡಿಎ ಪಡೆಯಲು ಸದನಕ್ಕೆ ಹಾಜರಾಗ್ಲಾ ?:** ಬಜೆಟ್ ಅಧಿವೇಶನಕ್ಕೆ ಗೈರಾಗಿರುವುದಕ್ಕೆ ಸ್ಪಷ್ಟನೆ ನೀಡಿದ ಕುಮಾರಸ್ವಾಮಿ, ನಾನು ಟಿಎ-ಡಿಎ ಪಡೆಯಲು ಸದನಕ್ಕೆ ಹಾಜರಾಗಬೇಕಿತ್ತಾ? ಸದನದಲ್ಲಿ ಭಾಗಿಯಾಗುವುದರಿಂದ ಏನು ಪ್ರಯೋಜನ ಇಲ್ಲ, ಸದನದಲ್ಲಿ ಉತ್ತಮ ಚರ್ಚೆ ನಡೆಯುತ್ತಿಲ್ಲ, ಅಧಿಕೃತ ವಿಪಕ್ಷದವರು ಸಮಯ ಹಾಳು ಮಾಡುತ್ತಿದ್ದಾರೆ. ಇಲ್ಲಾ, ಶರ್ಟ್ ಬಿಚ್ಚಿ ನಿಲ್ಲುತ್ತಾರೆ. ಇದನ್ನೆಲ್ಲಾ ನೋಡುವುದಕ್ಕೆ ಸದನಕ್ಕೆ ಹೋಗಬೇಕಾ ಎಂದು ಪ್ರಶ್ನಿಸಿದರು.

> ಮಧು ಬಂಗಾರಪ್ಪ ಪಕ್ಷ ತೊರೆಯುವುದು ಹಳೆಯ ವಿಚಾರ. ಮಧು ಬಂಗಾರಪ್ಪ ಸಿದ್ದರಾಮಯ್ಯ ಭೇಟಿ ವಿಚಾರದಲ್ಲಿ ಯಾವುದೇ ವಿಶೇಷ ಇಲ್ಲ. ಇದು 1 ವರ್ಷದಿಂದ ನಡೆಯುತ್ತಿರುವ ಬೆಳವಣಿಗೆ. ಹೋಗಬೇಕಾದರೆ ಏನೇನೋ ಸಬೂಬು ಹೇಳಿಕೊಂಡು ಹೋಗ್ತಾರೆ. ಪಕ್ಷದ ಬಾಗಿಲು ತೆರೆದಿದೆ, ಹೋಗೋರು ಹೋಗಬಹುದು. ಹಳಬರು ಹೋದರೆ ಹೊಸಬರು ಬರುತ್ತಾರೆ.
>
> • ಎಚ್.ಡಿ. ಕುಮಾರಸ್ವಾಮಿ, ಮಾಜಿ ಸಿಎಂ